# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟಸನ್ಸ್ ರಸ್ತೆ, ಫ್ರೇಜರ್ ಟೌನ್**

ಸ.ಕಾ.ನಿ.ಅ/ಪುನ/ಪಿಆರ್/ 04 /2022-23 ದಿನಾಂಕ: 16-07-2022

**ದಿನಾಂಕ:- 16-07-2022 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡುವಳಿಗಳು:-**

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಕಮಿಟಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ನೇತಾಜಿ ರಸ್ತೆಯಲ್ಲಿ ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡು ವ್ಯಾಪರ ಮಾಡುತ್ತಿರುವ ಬಗ್ಗೆ ತಿಳಿಸಲಾಗಿರುತ್ತದೆ.
2. ರಸ್ತೆಯಲ್ಲಿ ಅನಧೀಕೃತವಾಗಿ ವಾಹನಗಳನ್ನು ನಿಲ್ಲುಸುತ್ತಿದ್ದು ಹಾಗೂ ಬೀದಿ ಬದಿ ವ್ಯಾಪರಗಳು ರಸ್ತೆ ಬದಿಗಳಲ್ಲಿ ವ್ಯಾಪರ ಮಾಡುತ್ತಿರುವುದ್ದರಿಂದ ಸಾರ್ವಜನಿಕರು ಓಡಾಡಲು ತೊಂದರೆಯಾಗುತ್ತಿರುವ ಬಗ್ಗೆ ವಾರ್ಡ್ ಕಮಿಟಿ ಸದಸ್ಯರು ತಿಳಿಸಿರುತ್ತಾರೆ.
3. ರಾತ್ರಿ ವೇಳೆಯಲ್ಲಿ ವ್ಯಾಪರಿಗಳು ಸುರಿಯುತ್ತಿರುವ ಕಸದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಆರೋಗ್ಯ ಪರಿವೀಕ್ಷಕರಿಗೆ ಹಾಗೂ ಮಾರ್ಷಲ್ ರವರಿಗೆ ಸೂಚಿಸಲಾಯಿತು.
4. ನೇತಾಜಿ ಸ್ಲಂ ಹತ್ತಿರ Abounded Vehicle ಗಳನ್ನು ಅನಧೀಕೃತವಾಗಿ ನಿಲ್ಲುಸುತ್ತಿರುವ ಬಗ್ಗೆ ಪೋಲೀಸ್ ಇಲಾಖೆಯೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲು ಸಂಚಾರಿ ಪೋಲಿಸ್ ಅಧಿಕಾರಿಗಳಿಗೆ ಸೂಚಿಸಲಾಯಿತು.
5. ನೇತಾಜಿ ಸ್ಲಂ ಹತ್ತಿರ ಕಾಂಕ್ರೀಟ್ ಮೀಕ್ಸಿಂಗ್ ಮತ್ತು ಇತರೇ ವಾಹಗಳನ್ನು ಅನಧೀಕೃತವಾಗಿ ನಿಲ್ಲುಸುತ್ತಿರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಂಚಾರಿ ಪೋಲಿಸ್ ಅಧಿಕಾರಿಗಳಿಗೆ ಸೂಚಿಸಲಾಯಿತು.
6. ಕೆಂಚಪ್ಪ ರಸ್ತೆಯಲ್ಲಿ ಆಗಿರುವ worn out surface asphalt ಅನ್ನು ಮರು ಡಾಂಬರೀಕರಣ ಮಾಡಲು ಸೂಚಿಸಲಾಗಿರುತ್ತದೆ.
7. ಪ್ರಾಮಿನೆಡ್ ರಸ್ತೆ 2ನೇ ಅಡ್ಡರಸ್ತೆಯಲ್ಲಿ ರಸ್ತೆ ಡಾಂಬರೀಕರಣ ಕಾಮಗಾರಿಯನ್ನು ಪೂರ್ಣಗೊಳಿಸಿರುವುದಾಗಿ ವಾರ್ಡಿನ ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.
8. ಸ್ಟೀಫನ್ಸ್ ರಸ್ತೆಯಲ್ಲಿ ಬಿದ್ದಿದ್ದ ಪಾಟ್‌ಹೋಲ್‌ಗಳನ್ನು ಮುಚ್ಚಿರುವುದಾಗಿ ವಾರ್ಡಿನ ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.
9. ಸಿಂಧಿ ಕಾಲೋನಿ 2ನೇ ಅಡ್ಡರಸ್ತೆಯಲ್ಲಿ ಬಿದ್ದಿದ್ದ ಪಾಟ್‌ಹೋಲ್‌ಗಳನ್ನು ಮುಚ್ಚಿರುವುದಾಗಿ ವಾರ್ಡಿನ ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.
10. ಅಸಾಯಿ ರಸ್ತೆ ಮುಖ್ಯರಸ್ತೆಯಲ್ಲಿ ಬಿದ್ದಿರುವ ಪಾಟ್‌ಹೋಲ್‌ಗಳನ್ನು ಮುಚ್ಚಿರುವುದಾಗಿ Major Road ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿರುತ್ತಾರೆ.

11. ಕೋಲ್ಸ್ ರಸ್ತೆ, ಪ್ರಾಮಿನೆಡ್ ರಸ್ತೆ ಮತ್ತು ಸ್ಟೀಪನ್ಸ್ ರಸ್ತೆಯಲ್ಲಿ ಮನೆಯಿಂದ ರಸ್ತೆಯ ವರೆಗೆ ಪಾದಚಾರಿ ಮಾರ್ಗಕ್ಕೆ ಎತ್ತರವಾಗಿ ರ್‍ಯಾಂಪ್ ಅನ್ನು ನಿರ್ಮಿಸಿರುವುದ್ದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆ ಉಂಟಾಗುತ್ತಿರುವ ಬಗ್ಗೆ **Resident Welfare Association** ರವರು ದೂರು ನೀಡಿರುತ್ತಾರೆ. ಅದರಂತೆ ಸದರಿ ಸ್ಥಳವನ್ನು ಪರಿಶೀಲಿಸಿ ರಸ್ತೆಯ ವರೆಗೆ ಪಾದಚಾರಿ ಮಾರ್ಗಕ್ಕೆ ಎತ್ತರವಾಗಿ ರ್‍ಯಾಂಪ್ ಅನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲು ಸಂಬಂಧಪಟ್ಟ ವಾರ್ಡಿನ ಅಭಿಯಂತರರಿಗೆ ಸೂಚಿಸಲಾಗಿರುತ್ತದೆ.
12. ಎಂ.ಎಂ ರಸ್ತೆಯಲ್ಲಿ ಅನಧೀಕೃತವಾಗಿ ಖಾಸಗಿ ನೋ ಪಾರ್ಕಿಂಗ್ ಬ್ಯಾರಿಕೆಡ್‌ಗಳನ್ನು ತೆರವುಗೊಳಿಸಲು ಸೂಚಿಸಲಾಗಿರುತ್ತದೆ.
13. ಕೋಲ್ಸ್ ರಸ್ತೆಯಲ್ಲಿರುವ ಮರಗಳ ಸುತ್ತಲೂ ಗ್ರೀಲ್ಸ್ ಅಳವಡಿಸಲು ಸೂಚಿಲಾಯಿತು.
14. ಅನಧೀಕೃತವಾಗಿರುವ ಅಂಗಡಿಗಳನ್ನು ತೆರವುಗೊಳಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.
15. ವಾರ್ಡ್ ವ್ಯಾಪ್ತಿಯ ರಸ್ತೆ ಬದಿಯಲ್ಲಿ ಬಿದ್ದಿರುವ ಡೆಬ್ರೀಸ್ ಅನ್ನು ತೆರವುಗೊಳಿಸಲು ಸೂಚಿಸಲಾಯಿತು.
16. ಗುಡ್‌ವೀಲ್ ಶಾಲೆ ಹತ್ತಿರ ಪಾದಚಾರಿ ಮಾರ್ಗದಲ್ಲಿ ಚರಂಡಿ ಮೇಲಿನ ಕಲ್ಲುಗಳು ಮುರಿದು ಹೊಗಿರುವುದ್ದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವ ಬಗ್ಗೆ ತಿಳಿಸಿರುತ್ತಾರೆ.

ನಂತರ ಮುಂದಿನ ಸಭೆಯೊಳಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿಗಳು — Ward NO. 78.

ಕಾರ್ಯದರ್ಶಿ

**ಪ್ರತಿಯನ್ನು:**

6. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
7. ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
8. ಉಪ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
9. ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ವಿಭಾಗ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ / ಪುಲಿಕೇಶಿನಗರ) ರವರ ಅವಗಾಹನೆಗಾಗಿ ಕಳುಹಿಸಿದೆ.